# ಕರ್ನಾಟಕ ರಾಜ್ಯ ಚುನಾವಣಾ ಆಯೋಗದ ಪತ್ರಿಕಾ ಪ್ರಕಟಣೆ

- ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ –2018 ದಿನಾಂಕ 12.05.2018 ರಂದು ನಡೆಯಲಿದ್ದು , ಈ ಚುನಾವಣೆಯ ಹಿನ್ನೆಲೆಯಲ್ಲಿ ಅಧಿಕಾರಿಗಳ ವರ್ಗಾವಣೆ ,ಮತದಾರರ ಪಟ್ಟಿಗೆ ಸೇರ್ಪಡೆ, ಗುರುತಿನ ಚೀಟಿ ಯ ಲೋಪದೋಷಗಳು, ಮಾದರಿ ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂದಿಸಿದ ದೂರುಗಳು ಹಾಗೂ ಚುನಾವಣೆ ಕಾರ್ಯದ ವಿನಾಯಿತಿ ಕೋರಿ ಅರ್ಜಿಗಳನ್ನು ಸಾರ್ವಜನಿಕರು ಹಾಗೂ ವಿವಿಧ ಸರ್ಕಾರಿ ಇಲಾಖೆಗಳು ರಾಜ್ಯ ಚುನಾವಣಾ ಆಯೋಗದ ವಿಳಾಸಕ್ಕೆ ಕಳುಹಿಸುತ್ತಿರುತ್ತಾರೆ.
- ರಾಜ್ಯ ಚುನಾವಣಾ ಆಯೋಗವು ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ನಡೆಸುವ ಕಾರ್ಯವನ್ನು ನಿರ್ವಹಿಸುತ್ತದೆ. ವಿಧಾನಸಭಾ ಮತ್ತು ಲೋಕಸಭಾ ಚುನಾವಣೆ ಗೆ ಸಂಬಂದಿಸಿದ ವಿಚಾರಗಳು ಕೇಂದ್ರ ಚುನಾವಣಾ ಆಯೋಗದ ಭಾಗವಾದ ಮುಖ್ಯ ಚುನಾವಣಾಧಿಕಾರಿಗಳ ಕಛೇರಿ ಬೆಂಗಳೂರು ಇವರಿಗೆ ಸಂಬಂದಿಸಿದ್ದಾಗಿರುತ್ತದೆ.
- ಇದುವರೆಗೆ ವಿಧಾನಸಭಾ ಸಾರ್ವತಿಕ ಚುನಾವಣೆ –2018 ಕ್ಕೆ ಸಂಬಂದಿಸಿದಂತೆ 352 ಅರ್ಜಿಗಳು ರಾಜ್ಯ ಚುನಾವಣಾ ಆಯೋಗದಲ್ಲಿ ಸ್ವೀಕೃತವಾಗಿದ್ದು ಎಲ್ಲಾ ಅರ್ಜಿಗಳನ್ನು ಮುಖ್ಯ ಚುನಾವಣಾಧಿಕಾರಿಗಳು, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.
- ವಿಧಾನಸಭಾ ಹಾಗೂ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಅರ್ಜಿಗಳಿದ್ದರೂ ರಾಜ್ಯ ಚುನಾವಣಾ ಆಯೋಗ ಕ್ಕೆ ಕಳುಹಿಸದೇ **"ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ ಮತ್ತು ಪದನಿಮಿತ್ತ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿ.ಆ.ಸು.ಇ(ಚುನಾವಣೆಗಳು), ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ ಬೆಂಗಳೂರು"** ಈ ವಿಳಾಸಕ್ಕೆ ಕಳುಹಿಸಬೇಕು ಎಂಬುದನ್ನು ಈ ಮೂಲಕ ತಿಳಿಯಪಡಿಸಿದೆ.

ಅಧೀನ ಕಾರ್ಯದರ್ಶಿ

ರಾಜ್ಯ ಚುನಾವಣಾ ಆಯೋಗ